ಉ) ಹೊಸ ಕಟ್ಟಡವು ಕಾಂಪೌಂಡ್ ಇಲ್ಲದೆ ಜಾನುವಾರುಗಳ ವಾಸಸ್ಥಾನವಾಗಿದ್ದರೂ ಕಾಂಪೌಂಡ್ ನಿರ್ಮಾಣ ಮಾಡದೇ ಇರಲು ಕಾರಣವೇನು?

ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಬಂದಿದೆ.

ಇ) ಬಂದಿದೆ.

ಈ) ಅನುದಾನದ ಲಭ್ಯತೆಯನ್ನಾಧರಿಸಿ ಸ್ನಾತಕೋತ್ತರ ವಿಭಾಗಕ್ಕೆ ಪ್ರತ್ಯೇಕ ಕಟ್ಟಡ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು.

ಉ) ಅನುದಾನದ ಲಭ್ಯತೆಯನ್ನಾಧರಿಸಿ ಕ್ರಮ ವಹಿಸಲಾಗುವುದು.

ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು

228 (273), ಶ್ರೀ ಡಾ॥ ಮಾಲಕರೆಡ್ಡಿ ಎ.ಬಿ. (ಯಾದಗಿರಿ)

ಅ) ಯಾದಗಿರಿ ಜಿಲ್ಲಾ ಕೇಂದ್ರದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಿಂದುಳಿದ ಪ್ರದೇಶವಾರು ಈ ಜಿಲ್ಲೆಯ ಮಕ್ಕಳಿಗೆ ತಾಂತ್ರಿಕ ಶಿಕ್ಷಣ ಪಡೆಯಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಯಾದಗಿರಿ ಜಿಲ್ಲಾ ಕೇಂದ್ರದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಸ್ಥಾಪನೆಗೆ ಸರ್ಕಾರ ಕ್ರಮಕೈಗೊಳ್ಳುವುದೇ?

ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಬಂದಿದೆ.

ಇ) ಅನುದಾನದ ಲಭ್ಯತೆ, ಅಗತ್ಯತೆಗನುಗುಣವಾಗಿ ಹೊಸ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಎ.ಐ.ಸಿ.ಟಿ.ಇ. ಅನುಮತಿ ಅನುಸಾರ ಹೊಸ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಪ್ರಾರಂಭಿಸಲು ಕ್ರಮ ವಹಿಸಲಾಗುವುದು.

ರಾಜ್ಯ ಮತ್ತು ರಾಷ್ಟ್ರೀಯ ಪ್ರಶಸ್ತಿ ಪಡೆದ ಶಿಕ್ಷಕರು

229 (571), ಶ್ರೀ ಡಾ॥ ಕೆ.ಶ್ರೀನಿವಾಸಮೂರ್ತಿ (ನೆಲಮಂಗಲ)

ಅ) ಈವರೆಗೆ ನೆಲಮಂಗಲ ವಿಧಾನ ಸಭಾ ಕ್ಷೇತ್ರದಲ್ಲಿ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪಡೆದಿರುವ ಶಿಕ್ಷಕರ ಸಂಖ್ಯೆ ಎಷ್ಟು;

ಆ) ಪ್ರಶಸ್ತಿ ಪಡೆಯಲು ಸರ್ಕಾರ ರೂಪಿಸಿರುವ ಮಾನದಂಡಗಳೇನು;

ಇ) ಕಳೆದ ಮೂರು ವರ್ಷಗಳಲ್ಲಿ ನೆಲಮಂಗಲ ಕ್ಷೇತ್ರದ ಯಾವ ಶಾಲೆಗಳ ಶಿಕ್ಷಕರಿಗೆ ಯಾವ ಯಾವ ಪ್ರಶಸ್ತಿಗಳು ಬಂದಿವೆ;

ಈ) 2014–15ನೇ ಸಾಲಿನಲ್ಲಿ ರಾಜ್ಯ ಪ್ರಶಸ್ತಿ ಪಡೆದ ನೆಲಮಂಗಲ ವಿಧಾನ ಸಭಾ ಕ್ಷೇತ್ರದಲ್ಲಿರುವ ಶಿಕ್ಷಕರ ಹೆಸರು ಸಹಿತ ವಿವರ ನೀಡುವುದು; ಆ ಶಾಲೆಯಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು; ಈ ಪ್ರಶಸ್ತಿಗೆ ಅರ್ಹರಾದವರಿಂದ ಆ ಶಾಲೆಗೆ ಕೊಡುಗೆಗಳೇನು (ವಿವರ ನೀಡುವುದು);

ಉ) ಈ ಪ್ರಶಸ್ತಿಗಳು ಅರ್ಹರಿಗೆ ಸಿಗುತ್ತಿಲ್ಲವೆಂಬ ಸಾರ್ವಜನಿಕರ ಅಭಿಪ್ರಾಯ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?